ಕಿರುಸುದ್ದಿ

ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಚಿಕ್ಕಬಳ್ಳಾಪುರ: ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2025-26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ''ಶುಲ್ಕ ಮರುಪಾವತಿ'', ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಫೆಬ್ರವರಿ 15 ರವರೆಗೆ ವಿಸ್ತರಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ http://ssp.postmatric.karnataka.gov.in. ಕಾರ್ಯಕ್ರಮದ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್ ಸೈಟ್ ವಿಳಾಸ http://bcwd.karnataka.gov.in. ಸಹಾಯವಾಣಿ ಸಂಖ್ಯೆ: 8050770005, ಇಮೇಲ್ bcwdhelpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್ postmatrichelp@karnataka.gov.in,ದೂರವಾಣಿ ಸಂಖ್ಯೆ 1902 ಗೆ ಸಂಪರ್ಕಿಸಬಹುದೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉದಯೋನ್ಮುಖ ಕವಿ - ಕವಯತ್ರಿಯರಿಗೆ ಕವನ ಸ್ಪರ್ಧೆ

ಬೆಂಗಳೂರು: ಸೀನಿಯರ್ ಚೇಂಬರ್ ಇಂಟರ್ ನ್ಯಾಷನಲ್ ವತಿಯಿಂದ ಮಾ.7 ಹಾಗೂ 8 ರಂದು ನಡೆಯಲಿರುವ ಅಂತಾರಾಷ್ಟ್ರೀಯ ಸಮ್ಮೇಳನ ವಿಜಯೋತ್ಸವ 2026 ಅಂಗವಾಗಿ ಉದಯೋನ್ಮುಖ ಕವಿ - ಕವಯತ್ರಿಯರಿಗೆ ಕವನ ಸ್ಪರ್ಧೆ ಏರ್ಪಡಿಸಿದೆ. ವನ್ಯಜೀವಿ ಸಂರಕ್ಷಣೆ ನಮ್ಮ ಹೊಣೆ ಕುರಿತು 16 ಸಾಲುಗಳಿಗೆ ಮೀರದಂತೆ ಒಂದು ಕವನವನ್ನು ರಚಿಸಿ ಸ್ಪರ್ಧೆಗೆ ಕಳುಹಿಸಿಕೊಡಬಹುದಾಗಿದೆ. ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಥಮ ಬಹುಮಾನ 3 ಸಾವಿರ ರೂ., ದ್ವಿತೀಯ ಬಹುಮಾನ 2 ಸಾವಿರ ರೂ. ಹಾಗೂ ತೃತೀಯ ಬಹುಮಾನ 1 ಸಾವಿರ ರೂ. ನಗದು ಬಹುಮಾನ ನೀಡಲಾಗುತ್ತದೆ. ಆಸಕ್ತರು ಕವನಗಳನ್ನು ಬರೆದು, ಸೀ. ಎಸ್. ಚಂದ್ರಶೇಖರ್, ಅಧ್ಯಕ್ಷರು, ಸೀನಿಯರ್ ಚೇಂಬರ್ ಇಂಟರ್‌ನ್ಯಾಷನಲ್,114, 4 ನೇ ಮೈನ್, ಗಿರಿಧಾಮ ಲೇಔಟ್, ರಾಜರಾಜೇಶ್ವರಿ ನಗರ, ಬೆಂಗಳೂರು 560098 ಈ ವಿಳಾಸಕ್ಕೆ, ಫೆ.28 ರೊಳಗೆ ತಮ್ಮ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ ನಮೂದಿಸಿ ಕಳುಹಿಸಬೇಕು. ಪ್ರವೇಶ ಶುಲ್ಕ 100 ರೂ. ನಿಗದಿ ಪಡಿಸಲಾಗಿದ್ದು, 9480354500 ಕ್ಕೆ ಫೋನ್ ಪೇ/ ಗೂಗಲ್ ಪೇ ಕಳುಹಿಸಿ ನೊಂದಾಯಿಸಿಕೊಳ್ಳಬಹುದಾಗಿದೆ. ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನವನ್ನು ಮಾ.7ರಂದು ಬಂಟರ ಸಂಘ, ಅತ್ತಿಗುಪ್ಪೆ ಬೆಂಗಳೂರು ಬೃಹತ್ ಸಮ್ಮೇಳನದಲ್ಲಿ ನೀಡಲಾಗುತ್ತದೆ. ಹೆಚ್ಚಿನ ವಿವರಗಳಿಗಾಗಿ 9480354500 ಸಂಪರ್ಕಿಸಬಹುದಾಗಿದೆ.

ವಾರ್ಡ್ ಗಡಿಗಳ ಪಾಲನೆ ಕಡ್ಡಾಯ

ಬೆಂಗಳೂರು: ಪಶ್ಚಿಮ ನಗರ ಪಾಲಿಕೆ ಚುನಾವಣೆಗೆ ಸಂಬಂಧಿಸಿದಂತೆ ಅಧಿಸೂಚನೆಯಲ್ಲಿ ನಮೂದಿಸಿರುವ ವಾರ್ಡ್ ಗಡಿಗಳ ಪಾಲನೆ ಕಡ್ಡಾಯ ಎಂದು ಪಾಲಿಕೆ ಆಯುಕ್ತ ಡಾ. ರಾಜೇಂದ್ರ ಕೆ.ವಿ. ಅಧಿಕಾರಿಗಳಿಗೆ ಸೂಚನೆ ನೀಡಿದರು. ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ಕರಡು ಮತದಾರರ ಪಟ್ಟಿಯ ಪರಿಶೀಲನೆಗೆ ಸಂಬಂಧಿಸಿದ ಪ್ರಮಾಣಿತ ಕಾರ್ಯವಿಧಾನ ಕುರಿತು ಸಭೆ ನಡೆಸಿದ ಅವರು, ಕರಡು ಮತದಾರರ ಪಟ್ಟಿ ಮಾಹಿತಿಯ ಆಧಾರದ ಮೇಲೆ ಎಲ್ಲಾ ವಾರ್ಡ್‌ಗಳನ್ನು, ವಿಶೇಷವಾಗಿ ವಿಭಜಿತ ವಾರ್ಡ್‌ಗಳನ್ನು, ಭೌಗೋಳಿಕವಾಗಿ ಭೇಟಿ ನೀಡಿ ನಿಯಮನುಸಾರ ಕ್ರಮವಹಿಸಿ. ಮತದಾರರ ನೋಂದಣಾಧಿಕಾರಿಗಳು ಮತ್ತು ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ ಯಾವುದೇ ಲೋಪದೋಷ ಆಗದಂತೆ ಸೂಕ್ಷ್ಮವಾಗಿ ಪರಿಶೀಲಿಸುವಂತೆ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು. ಕಂದಾಯ ಅಪರ ಆಯುಕ್ತ ಮಂಜುನಾಥ್ ಸ್ವಾಮಿ ಮಾತನಾಡಿ, ವಿಧಾನಸಭಾ ಮತದಾರರ ಪಟ್ಟಿಯು ಒಂದಕ್ಕಿಂತ ಹೆಚ್ಚಿನ ವಾರ್ಡ್‌ಗಳ ಮತದಾರರ ಪಟ್ಟಿಗೆ ಭಾಗಶಃ ವಿಭಜನೆಯಾಗಿದ್ದಲ್ಲಿ ಮನೆ ಮನೆಗೆ ಭೇಟಿ ನೀಡಿ ಪರಿಶೀಲಿಸಿ. ಒಂದೇ ಕುಟುಂಬದ ಮತದಾರರು ಬೇರೆ ಬೇರೆ ಮತಗಟ್ಟೆಗಳಿಗೆ ಹಂಚಿಕೆಯಾಗಿರುವುದನ್ನು ಸರಿಪಡಿಸಲು ಸೂಚಿಸಿದರು. ಮಲ್ಲೇಶ್ವರಂ ವಾರ್ಡ್ ನಲ್ಲಿ ಆಯುಕ್ತರು ಕರಡು ಮತದಾರರ ಪಟ್ಟಿಯನ್ನು ವಿಭಾಗದ ಕಂದಾಯ ಅಧಿಕಾರಿಗಳ ಜೊತೆ ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕೋಲಾರ ಜಿಲ್ಲಾಧಿಕಾರಿ ಸಮ್ಮುಖದಲ್ಲಿ ಪಾರಂಪರಿಕ ಸಂರಕ್ಷಣಾ ಸಮಿತಿ ಸಭೆ

ವೀರಗಲ್ಲು, ಶಾಸನಗಳ ಸಂರಕ್ಷಣೆಗೆ ಕ್ರಮ

ಕೋಲಾರ: ಜಿಲ್ಲೆಯ ಐತಿಹಾಸಿಕ ಅಸ್ಮಿತೆಯಾದ ಶಾಸನಗಳು, ವೀರಗಲ್ಲುಗಳು ಹಾಗೂ ಪುರಾತತ್ವ ಸ್ಮಾರಕವನ್ನು ವೈಜ್ಞಾನಿಕವಾಗಿ ಸಂರಕ್ಷಿಸಿ, ಮುಂದಿನ ಪೀಳಿಗೆಗೆ ಜಿಲ್ಲೆಯ ವೈಭವಯುತ ಇತಿಹಾಸವನ್ನು ಪರಿಚಯಿಸಲು ಜಿಲ್ಲಾಡಳಿತ ಕಟ್ಟುನಿಟ್ಟಿನ ಕ್ರಮವನ್ನು ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದರು.

ಕೆಸ್ವಾನ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಪಾರಂಪರಿಕ ಸಂರಕ್ಷಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲೆಯ ಪಾರಂಪರಿಕ ತಾಣಗಳ ಅಭಿವೃದ್ಧಿ ಹಾಗೂ ಭದ್ರತೆಗೆ ಸಂಬಂಧಿಸಿದಂತೆ ಅಧಿಕಾರಿಗಳಿಗೆ ಪ್ರಮುಖ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಪತ್ತೆಯಾಗಿರುವ ಸುಮಾರು 2000ಕ್ಕೂ ಹೆಚ್ಚು ಶಾಸನಗಳು ಹಾಗೂ ಅರಕ್ಷಿತ ವೀರಗಲ್ಲನ್ನು ಒಂದೆಡೆ ಸಂರಕ್ಷಿಸಲು ಬೃಹತ್ ವಸ್ತು ಸಂಗ್ರಹಾಲಯವನ್ನು ನಿರ್ಮಿಸಲಾಗುವುದು. ಈ ಯೋಜನೆಗಾಗಿ ಜಿಲ್ಲಾಡಳಿತದಿಂದ ಐದು ಎಕರೆ ಜಮೀನು ನೀಡಲು ಸಿದ್ಧವಿದ್ದು, ಈಕಂಬಳ್ಳಿ ಬಳಿ ಒಳಾಂಗಣ ಮತ್ತು ಹೊರಾಂಗಣ ಸಂಗ್ರಹಾಲಯ ರೂಪಿಸುವ ಬಗ್ಗೆ ಸಾಧ್ಯತಾ ವರದಿ ನೀಡಲು ಅಪರ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ಕೋಲಾರ ತಾಲೂಕಿನ ನರಸಾಪುರ, ವೇಮಗಲ್,

ಶ್ರೀನಿವಾಸಪುರದ ನಂಬಿಹಳ್ಳಿ ಹಾಗೂ ಮುಳಬಾಗಿಲಿನ ಹೆಬ್ಬಣಿ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಲ್ಲಿರುವ ವೀರಗಲ್ಲುಗಳನ್ನು ಸಂರಕ್ಷಿಸಿ ಪಾರಂಪರಿಕ ಪಾರ್ಕ್‌ಗಳನ್ನು ಅಭಿವೃದ್ಧಿಪಡಿಸಲು ನಿರ್ಧರಿಸಲಾಗಿದೆ. ಬಂಗಾರಪೇಟೆ ತಾಲ್ಲೂಕಿನ ಮರಗಲ್ ಗ್ರಾಮದಲ್ಲಿರುವ ಸುಮಾರು 20 ವೀರಗಲ್ಲುಗಳ ಸ್ಥಳ ಪರಿಶೀಲನೆಗೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ತೇರಹಳ್ಳಿಯ ಗಂಗರ ಕಾಲದ ದೇವಸ್ಥಾನ, ಹುನ್ಕುಂದ ಹಾಗೂ ದೊಡ್ಡಶಿವಾರ ಪ್ರದೇಶಗಳಲ್ಲಿನ ವೀರಗಲ್ಲುಗಳ ರಕ್ಷಣೆಗಾಗಿ ನಿರಂತರ ಪೊಲೀಸ್ ಗಸ್ತು ಏರ್ಪಡಿಸಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚಿಸಲಾಯಿತು.

ಮುಜರಾಯಿ ಇಲಾಖೆಯ ವ್ಯಾಪ್ತಿಯ ಎಲ್ಲಾ ದೇವಸ್ಥಾನದಲ್ಲಿ ಲಭ್ಯವಿರುವ ಅನುದಾನ ಬಳಸಿ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲು ಕ್ರಮ ಕೈಗೊಳ್ಳುವಂತೆ ಮುಜರಾಯಿ ತಹಶೀಲ್ದಾರರಿಗೆ ತಿಳಿಸಿದರು.

ಬೂದಿಕೋಟೆಯಲ್ಲಿನ ಹೈದರಾಲಿ ಜನ್ಮಸ್ಥಳದಲ್ಲಿ ಭದ್ರತಾ ಸಿಬ್ಬಂದಿ ಮತ್ತು ಸ್ವಚ್ಛತೆಯ ಕೊರತೆ ಇರುವುದನ್ನು ಗಮನಿಸಿದ ಜಿಲ್ಲಾಧಿಕಾರಿಗಳು, ಈ ಬಗ್ಗೆ ಕೂಡಲೇ ಸ್ಥಳ ಪರಿಶೀಲನೆ ನಡೆಸಿ ವರದಿ ಸಲ್ಲಿಸಲು ಮತ್ತು ಸ್ಥಳೀಯ ತಹಶೀಲ್ದಾರ್ ಅವರಿಗೆ ಸೂಚಿಸಿದರು.

ಜಿಲ್ಲೆಯ ಎಲ್ಲಾ ಪದವಿ ಕಾಲೇಜುಗಳಲ್ಲಿ ಹೆರಿಟೇಜ್ ಕ್ಲಬ್‌ನ್ನು ಕಡ್ಡಾಯವಾಗಿ ಸಕ್ರಿಯಗೊಳಿಸುವ ಮೂಲಕ ಯುವಜನತೆಯಲ್ಲಿ ಪಾರಂಪರಿಕ ಪ್ರಜ್ಞೆ ಮೂಡಿಸಬೇಕು. ಅಲ್ಲದೆ, ಸ್ಮಾರಕಗಳ ಸಂರಕ್ಷಣೆಯ ಕುರಿತು ತಜ್ಞರಿಂದ ವಿಶೇಷ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲು ಪುರಾತತ್ವ ಇಲಾಖೆಗೆ ನಿರ್ದೇಶನ ನೀಡಲಾಯಿತು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಎಸ್.ಎಂ. ಮಂಗಳಾ, ಸಂಪನ್ಮೂಲ ವ್ಯಕ್ತಿ ಸ್ವಾಮಿನಾಥನ್, ಅರಿವು ಶಿವಪ್ಪ ಕೋಲಾರ ನಗರಸಭೆ ಆಯುಕ್ತ ನವೀನ್ ಚಂದ್ರ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ತುಕಾರಾಂ, ಪಾರಂಪರಿಕ ಸಮಿತಿಯ ಸದಸ್ಯರು ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

ಒಂಬತ್ತು ರೈಲ್ವೆ ನಿಲ್ದಾಣಗಳ ನವೀಕರಣ

ಬೆಂಗಳೂರು: ನಗರದಲ್ಲಿ ಒಂಬತ್ತು ಪ್ರಮುಖ ರೈಲು ನಿಲ್ದಾಣವನ್ನು ಕೇಂದ್ರದ ಅಮೃತ ಭಾರತ ನಿಲ್ದಾಣ ಯೋಜನೆಯಲ್ಲಿ ಹಂತ ಹಂತವಾಗಿ ನವೀಕರಣಗೊಳಿಸಲಾಗುತ್ತಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಬೆಂಗಳೂರಿನ ಒಂಬತ್ತು ರೈಲು ನಿಲ್ದಾಣವನ್ನು ಆಧುನಿಕ, ಪ್ರಯಾಣಿಕ ಸ್ನೇಹಿ ಸಾರಿಗೆ ಕೇಂದ್ರಗಳಾಗಿ ಪರಿವರ್ತಿಸುವ ಗುರಿ ಹೊಂದಲಾಗಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಸಂಸದ ತೇಜಸ್ವಿ ಸೂರ್ಯ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಇದಕ್ಕಾಗಿ ನೈಋತ್ಯ ರೈಲ್ವೆಗೆ 2025-26ರಲ್ಲಿ 572 ಕೋಟಿ ರೂ. ಹಂಚಿಕೆ ಮಾಡಲಾಗಿದ್ದು, ಡಿಸೆಂಬರ್2025 ರವರೆಗೆ 468 ಕೋಟಿ ರೂ. ಖರ್ಚು ಮಾಡಲಾಗಿದೆ ಎಂದಿದ್ದಾರೆ.

ಬೆಂಗಳೂರು ಕಂಟೋನ್ಮೆಂಟ್, ಕ್ರಾಂತಿವೀರ ಸಂಗೊಳ್ಳಿರಾಯಣ್ಣ,ಯಶವಂತಪುರ,ಮಲ್ಲೇಶ್ವರ, ವೈಟ್‌ಫೀಲ್ಡ್, ಕೃಷ್ಣರಾಜಪುರಂ, ಕೆಂಗೇರಿ, ಚನ್ನಸಂದ್ರ ಮತ್ತು ದೊಡ್ಡಬಳ್ಳಾಪುರ ನಿಲ್ದಾಣಗಳನ್ನು ಈ ಅಮೃತ ಭಾರತ ನಿಲ್ದಾಣ ಯೋಜನೆಯಡಿ ಗುರುತಿಸಲಾಗಿದೆ ಎಂದು ಹೇಳಿದ್ದಾರೆ.

ಸಮಗ್ರ ಸೌಲಭ್ಯ: ನಿಲ್ದಾಣದ ಪ್ರವೇಶವನ್ನು ಸುಧಾರಿಸುವುದು, ಕಾಯುವ ಸಭಾಂಗಣಗಳು ಮತ್ತು ಶೌಚಾಲಯಗಳನ್ನು ಹೆಚ್ಚಿಸುವುದು, ಅಗಲವಾದ ಪಾದಚಾರಿ ಸೇತುವೆಗಳನ್ನು ನಿರ್ಮಿಸುವುದು ಮತ್ತು ಲಿಫ್ಟ್, ಎಸ್ಕಲೇಟರ್ ಹಾಗೂ ದಿವ್ಯಾಂಗ ಸ್ನೇಹಿ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಯಶವಂತಪುರದಲ್ಲಿ ಪೂರ್ವ ಭಾಗದ ಆಗಮನ ಪ್ಲಾಜಾ, ಎಲಿವೇಟೆಡ್ ರಸ್ತೆ ಮತ್ತು ಬಹು-ಹಂತದ ಕಾರು ಪಾರ್ಕಿಂಗ್‌ಗಾಗಿ ಸಿವಿಲ್ ಕೆಲಸಗಳು ಪೂರ್ಣಗೊಂಡಿವೆ. ಪಶ್ಚಿಮ ಭಾಗದ ನಿಲ್ದಾಣದ ಕಟ್ಟಡದ ಕೆಲಸಗಳು ಮತ್ತು ರಚನಾತ್ಮಕ ಅಭಿವೃದ್ಧಿ ಪ್ರಸ್ತುತ ಪ್ರಗತಿಯಲ್ಲಿದೆ. ಕಂಟೋನ್ಮೆಂಟ್‌ನಲ್ಲಿ 24 ಮೀಟರ್ ಅಗಲದ ತಿರುವು ರಸ್ತೆ, ತರಬೇತಿ ಕೇಂದ್ರ ಮತ್ತು ದಕ್ಷಿಣ ಭಾಗದ ಕಟ್ಟಡದ ರಚನಾತ್ಮಕ ಕೆಲಸಗಳು ಪೂರ್ಣಗೊಂಡಿವೆ. ಪಾದಚಾರಿ ಸೇತುವೆ ನಿರ್ಮಾಣ ನಡೆಯುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

ದೇವನಹಳ್ಳಿಯಲ್ಲಿ ರಾಗಿ ಖರೀದಿ ಕಾರ್ಯಕ್ಕೆ ಸಚಿವ ಕೆಎಚ್‌ಎಂ ಚಾಲನೆ

ಆರು ಲಕ್ಷ ಮೆಟ್ರಿಕ್‌ಟನ್ ರಾಗಿ ಖರೀದಿ ಗುರಿ

ದೇವನಹಳ್ಳಿ: ಸರ್ಕಾರದ ಬೆಂಬಲ ಬೆಲೆ ಯೋಜನೆಯಲ್ಲಿ, ರೈತರಿಂದ ಅಂದಾಜು ಆರು ಲಕ್ಷ ಮೆಟ್ರಿಕ್ ಟನ್ ರಾಗಿ ಖರೀದಿಸುವ ಗುರಿಯನ್ನು ಹೊಂದಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವ ಕೆ.ಎಚ್ ಮುನಿಯಪ್ಪ ಹೇಳಿದರು.

ಪಟ್ಟಣದಲ್ಲಿ 2025-26ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಲ್ಲಿ ರೈತರಿಂದ ನೇರವಾಗಿ ರಾಗಿಯನ್ನು ಖರೀದಿಸುವ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿ, ಪ್ರಸಕ್ತ ವರ್ಷ ಒಳ್ಳೆಯ ಬೆಲೆಯನ್ನು ಸರ್ಕಾರ ನಿಗದಿ ಪಡಿಸಿ, ರಾಗಿ ಖರೀದಿಸುತ್ತಿದೆಂದರು.

ರೈತರಿಂದ ನೇರವಾಗಿ ಖರೀದಿಸಿ ಅದರ ಹಣವನ್ನು ಯಾವುದೇ ಮಧ್ಯವರ್ತಿಗೆ ಆಸ್ಪದ ನೀಡದೇ ರೈತರ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ನೇರವಾಗಿ ಸಂದಾಯ ಮಾಡಲಾಗುತ್ತದೆ. ಗುಣಮಟ್ಟದ ರಾಗಿ ಪೂರೈಕೆ ಆದಲ್ಲಿ ಮುಂದಿನ ವರ್ಷದಲ್ಲಿ 8 ಲಕ್ಷ ಮೆಟ್ರಿಕ್ ಟನ್ ರಾಗಿ ಖರೀದಿಸುವ ಗುರಿ ಇಟ್ಟುಕೊಂಡಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರದೊಂದಿಗೆ ಮಾತುಕತೆ ನಡೆಸಿದೆ. ಮುಂದಿನ ದಿನದಲ್ಲಿ ಹೊರ ರಾಜ್ಯಗಳಿಗೂ ರಾಗಿ ಪೂರೈಕೆ ಮಾಡುವ ಗುರಿ ಹೊಂದಲಾಗಿದೆ. ಬೇಡಿಕೆಯ ಆಧಾರದ ಮೇಲೆ ಬೇರೆ ಬೇರೆ ರಾಜ್ಯಗಳಿಗೆ ರಾಗಿ ಸರಬರಾಜು ಮಾಡಲಾಗುವುದು. ಗುಣಮಟ್ಟದ ರಾಗಿಯಿಂದ ಬೇಡಿಕೆ ಹೆಚ್ಚಾಗಲಿದೆ. ಇದರಿಂದ ರೈತರ ಬಳಿ ರಾಗಿ ಖರೀದಿಸುವ ಪ್ರಮಾಣ ಕೂಡ ಹೆಚ್ಚಾಗಲಿದೆ. ಹಾಗಾಗಿ ರೈತರು ಗುಣಮಟ್ಟದ ರಾಗಿ ನೀಡಬೇಕು ಎಂದರು.

ಪ್ರತಿ ಕ್ವಿಂಟಾಲ್ ರಾಗಿಗೆ ರೂ. 4886 ನಿಗದಿ: ಪ್ರತಿ ಕ್ವಿಂಟಾಲ್ ರಾಗಿಗೆ ರೂ.4886 ನಿಗದಿ ಪಡಿಸಲಾಗಿದೆ. ಪ್ರತಿ ರೈತರಿಂದ ಒಂದು ಎಕರೆಗೆ 10 ಕ್ವಿಂಟಾಲ್ ನಂತೆ ಗರಿಷ್ಠ 50 ಕ್ವಿಂಟಾಲ್‌ಗಳನ್ನು ಮೀರದಂತೆ ಉತ್ತಮ ಗುಣಮಟ್ಟದ ರಾಗಿ ಖರೀದಿಸಲಾಗುವುದು ಎಂದರು.

ದೇವನಹಳ್ಳಿತಾಲೂಕಿನಲ್ಲಿ3678,ದೊಡ್ಡಬಳ್ಳಾಪುರ ತಾಲೂಕಿನಲ್ಲಿ 12687, ಹೊಸಕೋಟೆ ತಾಲೂಕಿನಲ್ಲಿ 1240, ನೆಲಮಂಗಲ ತಾಲೂಕಿನಲ್ಲಿ 5619 ಸೇರಿ ಒಟ್ಟು 23,224 ರೈತರು ರಾಗಿ ಪೂರೈಕೆಗೆ ನೋಂದಣಿ ಮಾಡಿಸಿಕೊಂಡಿದ್ದಾರೆ.

ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ವ್ಯವಸ್ಥಾಪಕ ನಿರ್ದೇಶಕ ಜಗದೀಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್, ತಹಶೀಲ್ದಾರ್ ಅನಿಲ್, ತಾಪಂ ಇಒ ಶ್ರೀನಾಥ್‌ಗೌಡ, ಗ್ಯಾರಂಟಿ ಪ್ರಾಧಿಕಾರದ ತಾಲ್ಲೂಕು ಅಧ್ಯಕ್ಷ ಜಗನ್ನಾಥ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೆ.ಸಿ.ಮಂಜುನಾಥ್, ದಿನ್ನೂರು ವೆಂಕಟೇಶ್, ಬಯಾಪ ನಿರ್ದೇಶಕ ಪ್ರಸನ್ನಕುಮಾರ್, ಚಂದ್ರಶೇಖರ್, ಸೋಮತ್ತನಹಳ್ಳಿ ಮಂಜುನಾಥ್, ಗೋಪಾಲ್, ಲಕ್ಷ್ಮಣಮೂರ್ತಿ ಮುಂತಾದವರಿದ್ದರು.

ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿ ಖಾಲಿ: ಅಶೋಕ

ಬೆಂಗಳೂರು: ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿ ಖಾಲಿಯಾಗಿದ್ದು, ಇದು ಸರ್ಕಾರ ಪಾಪರ್ ಆಗಿರುವುದರ ಸಂಕೇತವಾಗಿದೆ. ಇಂತಹ ಸಮಯದಲ್ಲಿ ಕಾಂಗ್ರೆಸ್ ಶಾಸಕರು ಮಜಾ ಮಾಡಲು ವಿದೇಶ ಪ್ರವಾಸ ಹೋಗುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಟೀಕಿಸಿದರು.

ವಿಧಾನಸೌಧದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಔಷಧಿ ಖರೀದಿಸಲು ಹಣವಿಲ್ಲ, ಪ್ಯಾರಾಸಿಟಾಮಾಲ್‌ನಿಂದ ಆರಂಭವಾಗಿ ಅಗತ್ಯವಾದ 800ಕ್ಕೂ ಅಧಿಕ ಔಷಧಿಗಳು ಲಭ್ಯವಿಲ್ಲವೆಂದು ನಾನು 2024ರ ಡಿಸೆಂಬರ್‌ನ ಅಧಿವೇಶನದಲ್ಲಿ ಹೇಳಿದ್ದೆ. ಆಗ ಸಚಿವ ದಿನೇಶ್ ಗುಂಡೂರಾವ್, ಕೂಡಲೇ ಔಷಧಿ ಖರೀದಿಸಲಾಗುವುದು ಎಂದು ಹೇಳಿದ್ದರು. ಇನ್ನೂ ಯಾವುದೇ ಔಷಧಿ ದಾಸ್ತಾನಿಲ್ಲ. ಈ ಮೂಲಕ ಆರೋಗ್ಯ ಇಲಾಖೆ ಅನಾರೋಗ್ಯ ಪೀಡಿತವಾಗಿದೆ. ಆಸ್ಪತ್ರೆಗಳ ನಿರ್ವಹಣೆಯ ಹಣದಿಂದ ಔಷಧಿ ಖರೀದಿಸುವ ದುಸ್ಥಿತಿಗೆ ಸರ್ಕಾರ ಬಂದಿದೆ. ಸಾಲ ಮಾಡಿ ಔಷಧಿ ಖರೀದಿಸುವ ಸ್ಥಿತಿ ಬಂದಿದೆ ಎಂದು ಆರೋಪಿಸಿದರು.

ಮಾರ್ಚ್‌ಗೆ ಟೆಂಡರ್‌ಗೆ ಅಂತಿಮಗೊಳಿಸಲು ಆರೋಗ್ಯ ಇಲಾಖೆಯಿಂದ ಆದೇಶ ಹೊರಡಿಸಲಾಗಿದೆ. ಅಂದರೆ ಮೇ, ಜೂನ್ ವರೆಗೆ ಸರ್ಕಾರಿ ಆಸ್ಪತ್ರೆಗಳಿಗೆ ಔಷಧಿ ಬಾರದೇ ಇದ್ದರೆ ರೋಗಿಗಳು ಸಾಯಬೇಕಾಗುತ್ತದೆ. ಅಪಘಾತವಾದರೆ ಬ್ಯಾಂಡೇಜ್ ಕೂಡ ಸಿಗುವುದಿಲ್ಲ, ಕೆಲವು ಆಸ್ಪತ್ರೆಗಳಲ್ಲಿ ವೈದ್ಯರು ಅನಿವಾರ್ಯವಾಗಿ ಹೊರಗೆ ಔಷಧಿ ಖರೀದಿಗೆ ಚೀಟಿ ಬರೆದುಕೊಡುತ್ತಿದ್ದಾರೆ. ನಮ್ಮ ಸರ್ಕಾರ ಇದ್ದಾಗ ಹೊರಗೆ ಔಷಧಿ ಖರೀದಿಗೆ ಚೀಟಿ ಬರೆಯಬಾರದೆಂದು ಸೂಚನೆ ನೀಡಲಾಗಿತ್ತು. ಕೇಂದ್ರ ಸರ್ಕಾರದ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸಲು ಸರ್ಕಾರ ಪ್ರಯತ್ನ ಮಾಡಿದೆ. ಈಗ ಜನರು ಜನೌಷಧಿ ಕೇಂದ್ರಗಳಲ್ಲೇ ಔಷಧಿ ಖರೀದಿಸುತ್ತಿದ್ದಾರೆ ಎಂದು ವಿವರಿಸಿದರು.

ವಂದೇ ಮಾತರಂಗೆ ಗೌರವ

ಕಾಂಗ್ರೆಸ್ ಪಕ್ಷ ಹಾಗೂ ಮಾಜಿ ಪ್ರಧಾನಿ ಪಂಡಿತ್ ಜವಹರ ಲಾಲ್ ನೆಹರು ವಂದೇಮಾತರಂ ಗೀತೆಯ ಸಾಲುಗಳನ್ನು ಕಡಿತ ಮಾಡಿ ಹಾಡಲು ಮಾತ್ರ ಅವಕಾಶ ಮಾಡಿತ್ತು. ವಂದೇ ಮಾತರಂ ಗೀತೆಯನ್ನು ಸಂಪೂರ್ಣವಾಗಿ ಹಾಡುವ ಕುರಿತು ಕೇಂದ್ರ ಸರ್ಕಾರ ಕ್ರಮ ಕೈಗೊಂಡಿದೆ. ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿಯವರಿಗೆ ಅಭಿನಂದನೆ ತಿಳಿಸುತ್ತೇನೆ. ಹಾಡಿನಲ್ಲಿ ದುರ್ಗೆಯ ಹೆಸರು ಇದೆ ಎಂಬ ಕಾರಣಕ್ಕೆ ಗೀತೆಯನ್ನು ಕಡೆಗಣಿಸಲಾಗಿತ್ತು ಎಂದು ಆರ್. ಅಶೋಕ ಹೇಳಿದರು.

ನಂದಿ ಜಾತ್ರೆಗೆ ಉಚಿತ ಆಟೋ ಸೇವೆ

ಚಿಕ್ಕಬಳ್ಳಾಪುರ: ಶ್ರೀ ಹರಿ ಕೃಷ್ಣ ಚಾರಿಟೇಬಲ್ ಟ್ರಸ್ಟ್ ವತಿಯಿಂದ ನಂದಿ ಜಾತ್ರೆಗೆ ಹೋಗುವ ಭಕ್ತರು ಉಚಿತ ಆಟೋ ಸೇವೆಯನ್ನು ನೀಡಲಾಗುತ್ತದೆ ಎಂದು ಬಿಜೆಪಿ ಮುಖಂಡ ಹಾಗೂ ಸಮಾಜ ಸೇವಕ ಆನೆ ಮೊಡಗು ಹರೀಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ನಗರದ ಸಿವಿಲ್ ಬಸ್ ನಿಲ್ದಾಣ , ಜೂನಿಯರ್ ಕಾಲೇಜು ಹಾಗೂ ನಂದಿ ಕ್ರಾಸ್ ಬಳಿ ಆಟೋ ನಿಲ್ದಾಣ ಗಳಿಂದ ಉಚಿತವಾಗಿ ಆಟೋ ಗಳು ಸಂಚಾರಿಸಲಿವೆ. ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಉಚಿತ ಆಟೋ ಸೇವೆ ಯನ್ನು ಮುಂದುವರಿಸಲಾಗುತ್ತಿದೆ ಎಂದರು.

ಮಾಜಿ ಶಾಸಕರಾದ ಸಿ.ವಿ ವೆಂಕಟರಾಯಪ್ಪ, ರೇಣುಕಾ ರಾಜೇಂದ್ರ, ಅವರಿಂದ ಹಿಡಿದು ಈಗಿನ ಶಾಸಕರು ವರಿಗೂ ಸಮಾಜ ಸೇವೆ ಮಾಡಿಕೊಂಡು ಬಂದಿದ್ದಾರೆ ಅವರನ್ನು ಮಾದರಿ ಯಾಗಿ ತೆಗೆದು ಕೊಂಡಿದ್ದೇನೆಂದರು. ಸಂಸದ ಸುಧಾಕರ್ ಅವರ ಜತೆ ಗುರುತಿಸಿ ಕೊಂಡು ನನ್ನದೆ ಆದ ಟ್ರಸ್ಟ್ ಮಾಡಿಕೊಂಡು ಸಮಾಜ ಸೇವೆ ಯಲ್ಲಿ ತೊಡಗಿಸಿ ಕೊಂಡು ಬಂದಿದ್ದೇನೆ ಎಂದರು. ಈ ಹಿಂದೆ ಗೋಧಾನ ಕಾರ್ಯಕ್ರಮ ಮಾಡಲಾಯಿತ್ತು. ಇದಕ್ಕೆ ಸಾಕ್ಷಿಯಾಗಿ ಬಿಜೆಪಿ ಯ ಮಾಜಿ ಸಚಿವ ಎಸ್ ಈಶ್ವರ್ ಪ್ಪ ಹಾಗೂ ಹಿಂದೂ ಫೈರ್ ಬ್ರಾಂಡ್ ಆಗಿರುವ ಬಸವ ಗೌಡ ಪಾಟೀಲ್ ಯತ್ನಾಳ್ ಅವರು ಬಂದು ಕಾರ್ಯಕ್ರಮ ಯಶ್ವಸಿ ಗೊಳಿಸಿದರು. ಇದನ್ನು ಮಾದರಿಯಾಗಿ ತೆಗೆದು ಕೊಂಡು ಬೇರೆ ಬೇರೆ ಹಳ್ಳಿಗಳಲ್ಲಿ ಕಾರ್ಯಕ್ರಮ ಮಾಡಲಾಯಿತ್ತು ಎಂದರು.

ಆಟೋ ಉಚಿತ ಸೇವೆ ವಿವರ

ಜನರ ಸೇವೆ ಜನಾರ್ಧನ ಸೇವೆ ಎಂಬಂತೆ ಜನರಿಗೆ ಸೇವೆ ಒದಗಿಸಲುವಾಗಿ ನಗರದಲ್ಲಿ ಪ್ರಮುಖವಾಗಿರುವ ಸಿವಿಲ್ ಬಸ್ ನಿಲ್ದಾಣ 10 ಆಟೋ , ಜೂನಿಯರ್ ಕಾಲೇಜು 10 ಆಟೋ ಹಾಗೂ ನಂಧಿ ಕ್ರಾಸ್ ಬಳಿ 5 ಆಟೋ ಗಳು ಈ ಮಾರ್ಗದಲ್ಲಿ ಉಚಿತ ವಾಗಿ ಸಂಚಾರ ಮಾಡಲಿವೆ ಎಂದು ಹೇಳಿದ್ದರು. ಈ ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿದ ತಿಪ್ಪೇನ ಹಳ್ಳಿ ಮಾಜಿ ಗ್ರಾಮ ಪಂ ಮಾಜಿ ಅಧ್ಯಕ್ಷ ಮುರಳಿ, ಕೇಶವ ರೆಡ್ಡಿ, ವಿನಯ್, ನಾಗರ್ಜುನ್ ಇತ್ತತರು ಹಾಜರಿದ್ದರು.

ಕ್ರೀಡೆಯಿಂದ ಸ್ಫೂರ್ತಿ ಹೆಚ್ಚಳ

ತುಮಕೂರು: ಕ್ರೀಡೆ ಮನುಷ್ಯನಲ್ಲಿ ಸ್ಫೂರ್ತಿಯನ್ನು ನೀಡುತ್ತಿದೆ. ಕ್ರೀಡೆಯಿಂದ ಹೊಸ ಹುಮ್ಮಸ್ಸು ಬರುವುದಲ್ಲದೆ. ಎಲ್ಲರೂ ಸೇರಿ ಒಂದು ತಂಡವಾಗಿ ಕೆಲಸ ಮಾಡಲು ಸಹಕಾರಿ ಯಾಗಲಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್.ಕೆ.ವಿ.ತಿಳಿಸಿದರು.

ನಗರದ ಮಹಾತ್ಮಗಾಂಧಿ ಸ್ಟೇಡಿಯಂನ ಡಾ.ಜಿ.ಪರಮೇಶ್ವರ ಒಳಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಬೆಂಗಳೂರು ವಿಭಾಗೀಯ ಮಟ್ಟದ ಸಮಾಜ ಕಲ್ಯಾಣ ಇಲಾಖೆ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಿಗೆ ಚಾಲನೆ ನೀಡಿ ಮಾತನಾಡಿ, ಇತ್ತೀಚಿನ ದಿನದಲ್ಲಿ ಕ್ರೀಡಾ ಚಟುವಟಿಕೆಗಳು ಹೆಚ್ಚಾಗಿ ನಡೆಯುತ್ತಿವೆಂದರು.

ನಮ್ಮ ಇಲಾಖೆಯಲ್ಲಿ ಪ್ರತಿವರ್ಷ ಕ್ರೀಡಾಕೂಟ ಏರ್ಪಡಿಸಲಾಗುತ್ತಿದೆ. ಇದು ನಿಮಗೆ ಎರಡನೇ ವರ್ಷದ ಕ್ರೀಡಾಕೂಟ. ನಿಮ್ಮಲ್ಲಿರುವ ಪ್ರತಿಭೆ ಪ್ರದರ್ಶನಕ್ಕೆ ಇದು ಒಳ್ಳೆಯ ವೇದಿಕೆ ಇದನ್ನು ಬಳಕೆ ಮಾಡಿಕೊಂಡು, ಮತ್ತಷ್ಟು ಉತ್ಸಾಹದಿಂದ ವೃತ್ತಿ ಜೀವನದಲ್ಲಿ ಮೇಲೆ ಬರಲು ಪ್ರಯತ್ನಿಸಿ ಎಂದರು.

ಜಿಲ್ಲೆಯಲ್ಲಿ ಇತ್ತೀಚಿನ ದಿನದಲ್ಲಿ ರಾಜ್ಯಮಟ್ಟದ ಒಲಂಪಿಕ್ ಕ್ರೀಡಾಕೂಟ ನಡೆದಿವೆ. ಕ್ರೀಡಾ ಚಟುವಟಿಕೆಗೆ ಒಳ್ಳೆಯ ವ್ಯವಸ್ಥೆ ಇದೆ.ನಿಮಗೆ ಒಳ್ಳೆಯ ಕ್ರೀಡಾಮನೋಭಾವನೆ ಒಳ್ಳೆಯಲು ಸಹಕಾರಿಯಾಗಲಿದೆ.ಈ ಕ್ರೀಡಾಕೂಟದ ಮೂಲಕ ನಿಮ್ಮ ಇಲಾಖೆ ವಿವಿಧ ಜಿಲ್ಲೆಗಳ ನೌಕರರ ಸಮನ್ವಯತೆ ಬೆಳೆಯಲಿದೆ. ಇದು ಮುಂದಿನ ದಿನದಲ್ಲಿ ಮತ್ತಷ್ಟು ಗಟ್ಟಿತನದಿಂದ ಕೆಲಸ ಮಾಡಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಬೀದಿಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ)ದ ವಿವಿಧ ಪಾಲಿಕೆಗಳಿಂದ 11,707 ಬೀದಿ ಬದಿ ವ್ಯಾಪಾರಿಗಳನ್ನು ಗುರುತಿಸಲಾಗಿದೆ. ಗುರುತಿನ ಚೀಟಿ ವಿತರಿಸಲು ಕ್ರಮ ವಹಿಸ ಲಾಗುತ್ತಿದೆ ಎಂದು ಜಿಬಿಎ ತಿಳಿಸಿದೆ. ಬೆಂಗಳೂರು ಉತ್ತರ ನಗರ ಪಾಲಿಕೆ, ಪೂರ್ವ ನಗರ ಪಾಲಿಕೆ, ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಾಂಕೇತಿಕವಾಗಿ ಕೆಲವು ಬೀದಿಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ವಿತರಿಸಲಾಗಿದೆ ಎಂದು ಜಿಬಿಎ ತಿಳಿಸಿದೆ. ಉತ್ತರ ಪಾಲಿಕೆ ವ್ಯಾಪ್ತಿಯಲ್ಲಿ 4,445 ಬೀದಿಬದಿ ವ್ಯಾಪಾರಿಗಳನ್ನು ಗುರುತಿಸಲಾಗಿದೆ. ಪೂರ್ವ ನಗರ ಪಾಲಿಕೆ ವ್ಯಾಪ್ತಿಯಲ್ಲಿ 2,157 ಬೀದಿ ಬದಿ ವ್ಯಾಪಾರಿಗಳನ್ನು ಸಮೀಕ್ಷೆ ಮೂಲಕ ಗುರುತಿಸಲಾಗಿದ್ದು, ಈ ಪೈಕಿ 1,800 ಜನರಿಗೆ ಗುರುತಿನ ಚೀಟಿ ವಿತರಿಸಲು ಕ್ರಮವಹಿಸಲಾಗಿದೆ. ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ 5,105 ಬೀದಿಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿಯನ್ನು ವಿತರಿಸಲು ಕ್ರಮ ವಹಿಸಲಾಗಿದೆ. ಗುರುತಿಸಲಾದ ಎಲ್ಲಾ ಬೀದಿಬದಿ ವ್ಯಾಪಾರಿಗಳಿಗೆ ಅವರು ವ್ಯಾಪಾರ ನಡೆಸುತ್ತಿರುವ ಜಾಗಗಳಿಗೆ ತೆರಳಿ ಗುರುತಿನ ಚೀಟಿ ನೀಡಲಾಗುತ್ತದೆ .

ಆರೋಗ್ಯ ಜೀವನಕ್ಕೆ ಜಂತುಹುಳು ನಿವಾರಣೆ ಮಾತ್ರೆ ಸೇವಿಸಿ

ಚಿಂತಾಮಣಿ: ರಾಷ್ಟ್ರೀಯ ಜಂತುಹುಳ ನಿವಾರಣ ದಿನದ ಅಂಗವಾಗಿ ತಾಲೂಕು ಆರೋಗ್ಯ ಇಲಾಖೆ ವತಿಯಿಂದ ಮಕ್ಕಳಿಗೆ ಜಂತುಹುಳ ನಿವಾರಣ ಮಾತ್ರೆ ವಿತರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ನಗರದ ಟ್ಯಾಂಕ್ ಬಂಡ್ ರಸ್ತೆಯ ಶ್ರೀ ವಾಣಿ ಅನುದಾನಿತ ವಿದ್ಯಾ ಸಂಸ್ಥೆಯಲ್ಲಿ ರಾಷ್ಟ್ರೀಯ ಜಂತುಹುಳ ನಿವಾರಣ ದಿನದಲ್ಲಿ ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಸಂತೋಷ್‌ಬಾಬು ಭಾಗವಹಿಸಿ ಮಾತನಾಡಿ ತಾಲೂಕಿನಲ್ಲಿ ಸುಮಾರು 76 ಸಾವಿರದ 368 ಮಕ್ಕಳಿಗೆ ಜಂತುಹುಳ ನಿವಾರಣಾ ಮಾತ್ರೆ ವಿತರಿಸುವ ಗುರಿ ಹೊಂದಲಾಗಿದೆಯೆಂದು ತಿಳಿಸಿದರು.

ಪ್ರತಿವರ್ಷ ಫೆಬ್ರುವರಿ ಮತ್ತು ಸೆಪ್ಟೆಂಬರ್ ತಿಂಗಳಿನಲ್ಲಿ ವಾರ್ಷಿಕ ಎರಡು ಬಾರಿ ಆರು ತಿಂಗಳಿಗೆ ಒಂದು ಬಾರಿ 19 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಜಂತುಹುಳ ನಿವಾರಣ ಮಾತ್ರೆ ವಿತರಿಸಲಾಗುವುದು. ಮಕ್ಕಳಿಗೆ ಮಾತ್ರೆ ಕೊಡುವುದರಿಂದ ಮಕ್ಕಳಲ್ಲಿ ರಕ್ತಹೀನತೆ ಮತ್ತು ಇದರಿಂದ ಆಗುವ ದುಷ್ಪರಿಣಾಮವನ್ನು ತಡೆಗಟ್ಟುವ ಗುರಿ ಹೊಂದಲಾಗಿದೆ ಎಂದು ನುಡಿದರು.

ಟಿಹೆಚ್‌ಒ ಡಾ. ಎಂ.ಎಸ್. ರಾಮಚಂದ್ರರೆಡ್ಡಿ ಮಾತನಾಡಿ ಮಕ್ಕಳು ಪಾದರಕ್ಷೆ ಬಳಸದೆ ಬರಿಗಾಲಲ್ಲಿ ಮಲ ಮೂತ್ರ ವಿಸರ್ಜನೆ ಮಾಡುವುದು, ನಡೆಯುವುದು ಹಾಗೂ ಸ್ವಚ್ಛವಾಗಿ ಕೈ ತೊಳೆಯದೇ ಇದ್ದಾಗ ಮಕ್ಕಳ ಹೊಟ್ಟೆಯಲ್ಲಿ ಜಂತು

ಹುಳುಗಳು ಸೇರಿಕೊಂಡು ರಕ್ತ ಹೀನತೆಯನ್ನು ಉಂಟು ಮಾಡುತ್ತವೆ. ಆದ್ದರಿಂದ ಮಕ್ಕಳು ನಡೆಯುವಾಗ, ಬಹಿರ್ದೆಸೆಗೆ ಹೋಗುವಾಗ ಪಾದರಕ್ಷೆ ಧರಿಸ ಬೇಕು. ಹಾಗೂ ಆಹಾರ ಸೇವನೆಗೆ ಮುಂಚೆ ಕೈಗಳನ್ನು ಸ್ವಚ್ಛಗೊಳಿಸಿಕೊಳ್ಳುವು ದರಿಂದ ಈ ಸಮಸ್ಯೆಗಳಿಂದ ದೂರವಿರಬಹುದೆಂದರು.

ನಗರ ಆರೋಗ್ಯ ಕೇಂದ್ರದ ವೈದ್ಯಧಿಕಾರಿ ಡಾ. ಬಸವ ಮಂಜೇಶ್ ಮಾತನಾಡಿ ಮಕ್ಕಳು ಸ್ವಚ್ಛತೆ ಕಡೆ ಹೆಚ್ಚಿನ ಗಮನ ಹರಿಸಬೇಕು. ಮತ್ತು ಪೌಷ್ಠಿಕ ಆಹಾರ ಸೇವನೆ ಮಾಡಬೇಕು ಎಂದು ಹೇಳಿದರು. ವಾಣಿ ಶಾಲೆಯ ಮುಖ್ಯ ಶಿಕ್ಷಕ ಜೆ ಜಿ ದೇವರಾಜ್ ಮಾತ ನಾಡಿ, ಜಂತು ಹುಳು ಮಾತ್ರೆಯನ್ನು ಎಲ್ಲರೂ ವರ್ಷಕ್ಕೆ ಎರಡು ಬಾರಿ ಕಡ್ಡಾಯವಾಗಿ ಸೇವಿಸಬೇಕು. ರಕ್ತ ಹೀನತೆಯನ್ನು ತಡೆಗಟ್ಟಬೇಕು ಎಂದು ಹೇಳಿದರು. ವಿದ್ಯಾರ್ಥಿಗಳಿಗೆ ಜಂತುಹುಳು ನಿವಾರಣೆ ಮಾತ್ರೆ ವಿತರಣೆ ಮಾಡಿ ಸ್ಥಳದಲ್ಲೇ ನುಂಗಿಸಲಾಯಿತು.

ಆರೋಗ್ಯ ಇಲಾಖೆಯ ಶ್ರೀನಿವಾಸ್ ರೆಡ್ಡಿ, ಸರಸ್ವತಮ್ಮ, ಆರೋಗ್ಯ ಸುರಕ್ಷಿತ ಅಧಿಕಾರಿಗಳು, ನಿರೀಕ್ಷಣಾಧಿಕಾರಿ, ಆಶಾ ಕಾರ್ಯಕರ್ತರು, ಶಿಕ್ಷಕರಾದ ಸುರೇಶನಾಯ್ಕ, ಮಂಜುನಾಥ್, ಹನುಮಂತರಾಯಪ್ಪ ,ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

UJJIVAN SMALL FINANCE BANK

ನೋಂದಾಯಿತ ಕಚೇರಿ: ಗ್ರೇಪ್ ಗಾರ್ಡನ್, ನಂ. 27, 3ನೇ ಎ ಕ್ರಾಸ್, 18ನೇ ಮೈನ್, 6ನೇ ಬ್ಲಾಕ್, ಕೋರಮಂಗಲ, ಬೆಂಗಳೂರು- 560095, ಕರ್ನಾಟಕ
ಶಾಖಾ ಕಚೇರಿ: ನಂ. 307, 100 ಅಡಿ ವರ್ತುಲ ರಸ್ತೆ, ಕತ್ರಿಗುಪ್ಪೆ 4ನೇ ಹಂತ, ಬನಶಂಕರಿ 3ನೇ ಸ್ಟೇಜ್, ಪದ್ಮನಾಭನಗರ, ಬೆಂಗಳೂರು, ಕರ್ನಾಟಕ- 560070

ಇ-ಹರಾಜು ನೋಟಿಸ್

ಸೆಕ್ಯುರಿಟೈಸೇಷನ್ ಅಂಡ್ ರಿಕನ್‌ಸ್ಟ್ರಕ್ಷನ್ ಆಫ್ ಫೈನಾನ್ಶಿಯಲ್ ಅಸೆಟ್ಸ್ ಅಂಡ್ ಎನ್‌ಫೋರ್ಸ್‌ಮೆಂಟ್ ಆಫ್ ಸೆಕ್ಯುರಿಟಿ ಇಂಟರೆಸ್ಟ್ ಕಾಯ್ದೆ (ಸರ್ಫೇಸಿ ಕಾಯ್ದೆ)-2002 ಮತ್ತು ಸೆಕ್ಯುರಿಟಿ ಇಂಟರೆಸ್ಟ್ (ಎನ್‌ಫೋರ್ಸ್‌ಮೆಂಟ್) ರೂಲ್ಸ್-2002ರ ನಿಯಮ 8(6) & 9 (1) ಅಡಿಯಲ್ಲಿ ಮಾರಾಟಕ್ಕೆ ಇ-ಹರಾಜು ನೋಟಿಸ್

ಈ ಕೆಳಗೆ ಸಹಿ ಮಾಡಿರುವ ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್‌ನ ಅಧಿಕೃತ ಅಧಿಕಾರಿಯು ಸರ್ಫೇಸಿ ಕಾಯ್ದೆಯ ಸೆಕ್ಷನ್ 13(4)ರಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಗಿನ ಆಸ್ತಿಗಳನ್ನು ಸ್ವಾಧೀನಕ್ಕೆ ಪಡೆದಿರುತ್ತಾರೆ. ಸಾಲಗಾರರಿಗೆ ನಿರ್ದಿಷ್ಟವಾಗಿ ಮತ್ತು ಸಾರ್ವಜನಿಕರಿಗೆ ಸಾಮಾನ್ಯವಾಗಿ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಬ್ಯಾಂಕಿಗೆ ಪಾವತಿಸಲು ಬಾಕಿ ಇರುವ ಮೊತ್ತವನ್ನು ಭರಿಸಿಕೊಳ್ಳುವ ಸಲುವಾಗಿ ಈ ಕೆಳಗೆ ಹೆಸರಿಸಿದ ಖಾತೆಗಳ ಅಡಮಾನ ಆಸ್ತಿಗಳನ್ನು **"ಎಲ್ಲಿದೆಯೋ ಅಲ್ಲಿ ಆಧಾರದಲ್ಲಿ"** ಮತ್ತು **"ಏನು ಇದೆಯೋ ಅದು ಆಧಾರದಲ್ಲಿ"** ಈ ಕೆಳಗೆ ನಿರ್ದಿಷ್ಟಪಡಿಸಿದ ದಿನಾಂಕಗಳಂದು ಇ-ಹರಾಜು ನಡೆಸಲಾಗುತ್ತಿದೆ.

ಕ್ರಮ ಸಂಖ್ಯೆ: ಸಾಲ ಖಾತೆ ಸಂಖ್ಯೆ/ ಸಾಲಗಾರರು/ ಸಹ ಸಾಲಗಾರರು/ ಜಾಮೀನುದಾರರ ಹೆಸರು	(1) ದಿನಾಂಕ 13-2ರ ನೋಟಿಸ್ & ದಿನಾಂಕದವರೆಗೆ ಡಿಮ್ಯಾಂಡ್ ಮಾಡಲಾದ ಮೊತ್ತ (2) ಸ್ವಾಧೀನ ದಿನಾಂಕ	ಪ್ರಸ್ತುತ ಬಾಕಿ ಮೊತ್ತ	ಮೀಸಲು ಬೆಲೆ ರೂಪಾಯಿಗಳಲ್ಲಿ	ಅರ್ನೆಸ್ಟ್ ಮನಿ ಡೆಪಾಸಿಟ್ (ಇಎಂಡಿ) ರೂಪಾಯಿಗಳಲ್ಲಿ
1122210080000021 1. ಶ್ರೀ ರಾಜು 2. ಶ್ರೀಮತಿ ಸರಸ್ವತಿ ವಿ 3. ಶ್ರೀಮತಿ ಮಂಗಳಮ್ಮ 4. ಶ್ರೀಮತಿ ಲಕ್ಷ್ಮಿ	**(i) 27.04.2022 & ₹ 4,41,753/-** (ರೂಪಾಯಿ ನಾಲ್ಕು ಲಕ್ಷದ ನಲುವತ್ತೊಂದು ಸಾವಿರದ ಏಳು ನೂರ ಐವತ್ತಮೂರು ಮಾತ್ರ) 2. ಸಾಂಕೇತಿಕ ಸ್ವಾಧೀನ: 14.12.2022 ಭೌತಿಕ ಸ್ವಾಧೀನ: 10.12.2025	**₹ 10,14,625.35** (ರೂಪಾಯಿ ಹತ್ತು ಲಕ್ಷದ ಹದಿನಾಲ್ಕು ಸಾವಿರದ ಆರು ನೂರ ಇಪ್ಪತ್ತೈದು ಮತ್ತು ಪೈಸೆ ಮೂವತ್ತೈದು ಮಾತ್ರ)	**₹ 6,25,000/-** (ರೂಪಾಯಿ ಆರು ಲಕ್ಷದ ಇಪ್ಪತ್ತೈದು ಸಾವಿರ)	**₹ 62,500/-** (ರೂಪಾಯಿ ಅರುವತ್ತೆರಡು ಲಕ್ಷದ ಐದು ನೂರು ಮಾತ್ರ)

ಆಸ್ತಿಯ ಶೆಡ್ಯೂಲ್: ಖಾನೇಶ್ಮರಿ ನಂ. 136/133/21 ಮತ್ತು ಇ-ಖಾತೆ ಸಂಖ್ಯೆ (ಪಿಐಡಿ ನಂ) 152900103101100707 ಹೊಂದಿರುವ ಸ್ಥಿರಾಸ್ತಿಯ ಎಲ್ಲ ತುಂಡು ಮತ್ತು ತುಣುಕುಗಳು. ಪೂರ್ವದಿಂದ ಪಶ್ಚಿಮಕ್ಕೆ: 9.144 ಮೀಟರ್ ಮತ್ತು ಉತ್ತರದಿಂದ ದಕ್ಷಿಣಕ್ಕೆ: 9.144 ಮೀಟರ್. ವಿಳಾಸ: ವಂಡರಗುಪ್ಪೆ ಗ್ರಾಮ, ವಂಡರಗುಪ್ಪೆ ಗ್ರಾಮಪಂಚಾಯ್ತಿ, ಚನ್ನಪಟ್ಟಣ ತಾಲೂಕು ಮತ್ತು ರಾಮನಗರ ಜಿಲ್ಲೆ. ಗಡಿಗಳು- ಪೂರ್ವಕ್ಕೆ: ರಾಮಣ್ಣ ಅವರ ನಿವೇಶನ, ಪಶ್ಚಿಮಕ್ಕೆ: ಗೌರಮ್ಮ ಅವರ ನಿವೇಶನ, ಉತ್ತರಕ್ಕೆ: ರಸ್ತೆ, ದಕ್ಷಿಣಕ್ಕೆ: ಕೆಂಚಯ್ಯ ಅವರ ಆಸ್ತಿ. ಮೇಲಿನ ಆಸ್ತಿಯ ಒಡೆತನವು ಶ್ರೀ ರಾಜು, ಶ್ರೀಮತಿ ಮಂಗಳಮ್ಮ & ಶ್ರೀ ಲಕ್ಷ್ಮಿ (ನಿಮ್ಮ ಪೈಕಿ ನಂ. 1,3 & 4) ಅವರ ಹೆಸರಿನಲ್ಲಿದೆ.

ಇ-ಹರಾಜು ದಿನಾಂಕ ಮತ್ತು ಸಮಯ: 25.03.2026 ಬೆಳಿಗ್ಗೆ: 11.00 ರಿಂದ ಮಧ್ಯಾಹ್ನ 12.00

ಬಿಡ್ ಸಲ್ಲಿಕೆಗೆ ಕೊನೆಯ ದಿನಾಂಕ: 24.03.2026 ಅಥವಾ ಅದಕ್ಕೂ ಮೊದಲು ಬೆಳಿಗ್ಗೆ 10.00 ರಿಂದ ಸಂಜೆ 5.00
ಆಸ್ತಿಯ ವೀಕ್ಷಣೆ ದಿನಾಂಕ ಮತ್ತು ಸಮಯ: 23.03.2026ರ ಬೆಳಿಗ್ಗೆ 10.00 ರಿಂದ ಸಂಜೆ 5.00

ಹೆಚ್ಚಿನ ವಿವರಗಳಿಗೆ ಬ್ಯಾಂಕಿನ ಅಧಿಕೃತ ಅಧಿಕಾರಿಯನ್ನು ಸಂಪರ್ಕಿಸಿ:
ಶ್ರೀ ಗಂಗಾಧರ- ಮೊಬೈಲ್: 70191 19973 / ಶ್ರೀ ತಿಜೋ ಸಾಜನ್ : 78451 92961

ಹರಾಜನ್ನು "ಎಲ್ಲಿದೆಯೋ ಅಲ್ಲಿ" ಮತ್ತು "ಏನಿದೆಯೋ ಅದು ಆಧಾರದಲ್ಲಿ" ನಡೆಸಲಾಗುತ್ತದೆ.
ಇ-ಹರಾಜನ್ನು ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್ ಅನುಮೋದಿತ ಇ-ಹರಾಜು ಸೇವಾ ಪೂರೈಕೆದಾರರಾದ ಮೆಸಸ್ ಸಿ1 ಇಂಡಿಯಾ ಪ್ರೈವೇಟ್ ಲಿಮಿಟೆಡ್ ಮೂಲಕ ನಡೆಸಲಾಗುತ್ತದೆ. ಸಂಪರ್ಕ ವ್ಯಕ್ತಿ: ಶ್ರೀ ಪ್ರಭಾಕರನ್ (ಮೊಬೈಲ್ ನಂ. 7418281709). ಉದ್ದೇಶಿತ ಬಿಡ್ಡುದಾರರು ಆಸ್ತಿ ವಿವರಗಳಿಗೆ https://www.bankauctions.com ಅಥವಾ https://www/ujjivansfb.in.e-auctions ಗೆ ಭೇಟಿ ನೀಡಲು ಸಲಹೆ ಮಾಡಲಾಗಿದೆ ಮತ್ತು ಬಿಡ್‌ನಲ್ಲಿ ಭಾಗವಹಿಸಲು ಅವರು ತಮ್ಮ ಹೆಸರುಗಳನ್ನು https://www.bankauctions.com ಪೋರ್ಟಲ್‌ನಲ್ಲಿ ನೋಂದಾಯಿಸಬೇಕು ಮತ್ತು ಉಚಿತವಾಗಿ ತಮ್ಮ ಬಳಕೆದಾರರ ಐಡಿ ಮತ್ತು ಪಾಸ್‌ವರ್ಡ್‌ಗಳನ್ನು ಪಡೆಯಬಹುದು. ಸಂಭಾವ್ಯ ಬಿಡ್ಡುದಾರರು ಇ-ಹರಾಜಿನ ಬಗ್ಗೆ ಆನ್‌ಲೈನ್ ತರಬೇತಿಯನ್ನು ಸೇವಾಪೂರೈಕೆದಾರರಾದ ಮೆಸಸ್ ಸಿ1 ಇಂಡಿಯಾ ಪ್ರೈವೇಟ್ ಲಿಮಿಟೆಡ್ ಅವರಿಂದ ಪಡೆಯಬಹುದು.
ಹೆಲ್ಪ್‌ಲೈನ್ ನಂ. 7291918824, 25, 26. ಬೆಂಬಲ ಇ-ಮೇಲ್ ಐಡಿ: support@bankeauctions.com ಹರಾಜು ಪೋರ್ಟಲ್: https://www.bankauctions.com
ಮಾರಾಟದ ವಿವರವಾದ ಷರತ್ತು ಮತ್ತು ನಿಬಂಧನೆಗಳಿಗಾಗಿ ದಯವಿಟ್ಟು ನಮ್ಮ ಬ್ಯಾಂಕ್/ ಭದ್ರತಾ ಸಾಲದಾರರ ವೆಬ್‌ಸೈಟ್ ಅಂದರೆ:
https://www/ujjivansfb.in.e-auctions/https://www.bankauctions.com ವೀಕ್ಷಿಸಬಹುದು.

ದಿನಾಂಕ: 13.02.2026,
ಸ್ಥಳ: ಬೆಂಗಳೂರು
ಸಹಿ/- ಅಧಿಕೃತ ಅಧಿಕಾರಿ,
ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್